


ಬೆಂಗಳೂರಿನಲ್ಲಿ ಶನಿವಾರ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರು ವಿಶ್ವ ಮೀನುಗಾರಿಕೆ ದಿನಾಚರಣೆ ಪ್ರಯುಕ್ತ ಹಮ್ಮಿಕೊಂಡಿದ್ದ ಕಾರ್ಯಾಗಾರವನ್ನು ಉದ್ಘಾಟಿಸಿದರು. ಮೀನುಗಾರಿಕಾ ಸಚಿವ ಕೋಟಾ ಶ್ರೀನಿವಾಸ ಪೂಜಾರಿ, ಕುಮಾರಬಂಗಾರಪ್ಪ ಮತ್ತಿತರರು ಉಪಸ್ಥಿತರಿದ್ದರು.

# ಇನ್ನು ಮನೆ ಬಾಗಿಲಿಗೆ ಮೀನು

ಸಂ.ಕ.ಸಮಾಚಾರ, ಬೆಂಗಳೂರು

ಮೀನುಗಾರಿಕೆ ಕ್ಷೇತ್ರದಲ್ಲಿ ವ್ಯಾವಹಾರಿಕ ಶಿಸ್ತು ಹಾಗೂ ರಫ್ತು ವಹಿವಾಟು ಉತ್ತೇಜಿಸಲು ಸುಸಜ್ಜಿತ ಮೀನು ಕ್ವಾರಂಟೈನ್ ಘಟಕವನ್ನು ಪ್ರಾರಂಭಿಸಲಾಗುವುದು ಎಂದು ಮುಖ್ಯಮಂತ್ರಿ ಯಡಿಯೂರಪ್ಪ ತಿಳಿಸಿದ್ದಾರೆ.

ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಪ್ರಧಾನಮಂತ್ರಿ ಮತ್ಸ್ಯ ಸಂಪದ ಯೋಜನೆ ಉದ್ಘಾಟಿಸಿ ಮಾತನಾಡಿದ ಅವರು, ಬೆಂಗಳೂರು ಸಮೀಪದ ಹೆಸರುಘಟ್ಟ ಮೀನುಮರಿ ಉತ್ಪಾದನಾ ಕೇಂದ್ರದಲ್ಲಿ ಈ ಮಾದರಿ, ಸುಸಜ್ಜಿತ ಕ್ವಾರಂಟೈನ್ ಘಟಕ ಸ್ಥಾಪಿಸಲಾಗುವುದು ಎಂದರು.

ಅತ್ಯಾಧುನಿಕ ತಂತ್ರಜ್ಞಾನ ಅಳವಡಿಕೆಯ ಮೂಲಕ ಮೀನುಗಾರರ ಸುರಕ್ಷತೆ ಹಾಗೂ ಮೀನುಗಾರಿಕೆಯಲ್ಲಿ ಆದಾಯ ಹೆಚ್ಚಳ ಮಾಡುವುದು ನಮ್ಮ ಸರ್ಕಾರದ ಪ್ರಥಮಾದ್ಯತೆಯಾಗಿದೆ ಎಂದ ಮುಖ್ಯಮಂತ್ರಿಗಳು, ರಾಜ್ಯದಲ್ಲಿ ಅಲಂಕಾರಿಕ ಮೀನು ಉತ್ಪಾದನೆ ಮತ್ತು ಮಾರಾಟ ಚಟುವಟಿಕೆಯು ಇತ್ತೀಚಿನ ವರ್ಷಗಳಲ್ಲಿ ಪ್ರವರ್ಧಮಾನಕ್ಕೆ ಬರುತ್ತಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ವಿಶ್ವ ಮೀನುಗಾರಿಕೆ ದಿನಾಚರಣೆಯ ಈ ಶುಭ ಸಂದರ್ಭದಲ್ಲಿ ಪ್ರಧಾನಮಂತ್ರಿಗಳ ಮತ್ಸ್ಯಸಂಪದ ಯೋಜನೆಯ ಅನುಷ್ಠಾನ ಕುರಿತು ಕಾರ್ಯಾಗಾರ ಹಮ್ಮಿಕೊಂಡಿರುವುದು ಮೀನುಗಾರಿಕೆ ಕ್ಷೇತ್ರದ ಔದ್ಯಮಿಕ ಅವಕಾಶಗಳನ್ನು ಪರಿಚಯಿಸಲು ಈ ಕಾರ್ಯಾಗಾರವನ್ನು ಆಯೋಜಿಸಲಾಗಿದೆ ಎಂದೂ ಹೇಳಿದರು.

ಮತ್ಸ್ಯ ಸಂಪದ ಯೋಜನೆಯಡಿ ಪ್ರಸ್ತುತ ರಾಜ್ಯದ 137.199 ಕೋಟಿ ರೂಪಾಯಿಗಳ ಕ್ರಿಯಾಯೋಜನೆ ಅನುಮೋದನೆಯಾಗಿದೆ. ಕೇಂದ್ರದ ಪಾಲಿನ ಮೊದಲ ಕಂತಿನ ಅನುದಾನ 21.02 ಕೋಟಿ ರೂ. ಬಿಡುಗಡೆಯಾಗಿದ್ದು ರಾಜ್ಯದ 23 ಜಿಲ್ಲೆಗಳ ಕ್ರಿಯಾಯೋಜನೆಗಳು ಈ ಯೋಜನೆಯ ಅನುಷ್ಠಾನದ ವಿವಿಧ ಹಂತಗಳಲ್ಲಿವೆ ಎಂದರು.

ರಾಜ್ಯ ಸರ್ಕಾರ ಮೀನುಗಾರರ ಸುಮಾರು 60 ಕೋಟಿ ರೂಪಾಯಿ ಸಾಲ ಮನ್ನಾ ಮಾಡಿದೆ. ಅಂತೆಯೇ ಕರಾವಳಿ ಯಾಂತ್ರೀಕೃತ ಮೀನುಗಾರಿಕೆ ಪ್ರೋತ್ಸಾಹಕ್ಕಾಗಿ ಪ್ರತಿ ವರ್ಷ ಮೀನುಗಾರಿಕೆ ದೋಣಿಗಳು ಬಳಸುವ ಡೀಸೆಲ್‌ಗಾಗಿ ಸುಮಾರು 135 ಕೋಟಿ ರೂಪಾಯಿ ಅನ್ನು ಸಹಾಯಧನವನ್ನಾಗಿ ನೀಡಲಾಗುತ್ತಿದೆ ಎಂದರು.

ಕಾರ್ಯಕ್ರಮದಲ್ಲಿ ಕಂದಾಯ ಸಚಿವ ಆರ್.ಅಶೋಕ್, ಮೀನುಗಾರಿಕೆ ಹಾಗೂ ಬಂದರು ಖಾತೆಯ ಸಚಿವ ಕೋಟಾ ಶ್ರೀನಿವಾಸ ಪೂಜಾರಿ, ಶಾಸಕ ರಘುಪತಿ ಭಟ್ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.